(36)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ್ಣ ಇವರ ನಿಯಮ 72 ರ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.**

**ಪ್ರಶ್ನೆ:**

**ರಾಜ್ಯದಲ್ಲಿ ಉತ್ತಮವಾಗಿ ನಡೆಯುತ್ತಿರುವ ಅನುದಾನಿತ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ದಿ: 01.01.2016 ರಿಂದ ಪ್ರಸ್ತುತ ಅವಧಿಯವರೆಗೆ ನಿವೃತ್ತಿ, ಮರಣ, ರಾಜೀಣಾಮೆ ಇತ್ಯಾದಿ ಕಾರಣಗಳಿಂದ ಹಲವಾರು ಹುದ್ದೆಗಳು ಖಾಲಿ ಇದ್ದು ಸದರಿ ಹುದ್ದೆಗಳನ್ನು ತುಂಬಿಕೊಳ್ಳು ಅನುಮತಿ ನೀಡದೆ ಇರುವುದರಿಂದ ಸದರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತುಂಬಾ ತೊಂದರೆಯಾಗುತ್ತಿದೆ. ಸದರಿ ಖಾಲಿ ಹುದ್ದೆಗಳಲ್ಲಿ ವಯೋಮಿತಿ ಮೀರಿರುವ ಹಲವಾರು ಶಿಕ್ಷಕರು ಅನುದಾನಕ್ಕೊಳಪಡಸಬಹುದೆಂಬ ಆಸೆಯಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಆದ್ದರಿಂದ ದಿ: 01.01. 2016 ರಿಂದ ಪ್ರಸ್ತುತ ಸಾಲಿನವರೆಗೆ ನಿವೃತ್ತಿ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಆಗಿರುವ ಹುದ್ದೆಗಳನ್ನು ವೇತನಾನುದಾನಕ್ಕೊಳಪಡಿಸಬೇಕೆಂಬ ವಿಷಯವನ್ನು ನಿಯಮ 72 ರಲ್ಲಿ ಮಾನ್ಯ ಪ್ರಾಥಮಿಕ ಹಾಗು ಪ್ರೌಢಶಿಕ್ಷಣ ಸಚಿವರ ಗಮನ ಸೆಳೆಯಬಯಸುತ್ತೇನೆ.**

**ಉತ್ತರ:**

ರಾಜ್ಯದ ಖಾಸಗಿ ಅನುದಾನಿತ ಪ್ರೌಢ ಶಾಲೆಗಳಲ್ಲಿ ದಿನಾಂಕ: 31.12.2015 ರ ವರೆಗೆ ನಿವೃತ್ತಿ, ಮರಣ, ರಾಜೀನಾಮೆ ಇತ್ಯಾದಿ ಕಾರಣಗಳಿಂದ ತೆರವಾಗಿ ಖಾಲಿ ಇದ್ದ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶದ ಸಂಖ್ಯೆ: ಇಡಿ 14 ಎಸ್ಇಪಿ 2017 ದಿನಾಂಕ: 25.09.2018 ರಲ್ಲಿ ಅನುಮೋದನೆ ನೀಡಲಾಗಿದೆ.

ಅಂತೆಯೆ ಖಾಸಗಿ ಅನುದಾನಿತ ಪ್ರೌಢ ಶಾಲೆ / ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ: 01.01.2016 ರಿಂದ 31.12.2020 ರ ವರೆಗೆ ನಿವೃತ್ತಿ, ಮರಣ, ರಾಜೀನಾಮೆ ಇತ್ಯಾದಿ ಕಾರಣಗಳಿಂದ ತೆರವಾಗಿ ಖಾಲಿ ಇದ್ದ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶದ ಸಂಖ್ಯೆ: ಇಪಿ 396 ಎಸ್ಇಎಸ್ 2021 ದಿನಾಂಕ: 07.08.2024 ರಲ್ಲಿ ಅನುಮೋದನೆ ನೀಡಲಾಗಿದೆ. ಸದರಿ ಹುದ್ದೆಗಳನ್ನು ಆನ್‌ಲೈನ್ ಮೂಲಕ ಮಾತ್ರ ನೇಮಕಾತಿ ಮಾಡಿಕೊಳ್ಳಲು ಅನುಮೋದನೆ ನೀಡಲಾಗಿದ್ದು, ತಂತ್ರಾಂಶ ಅಭಿವೃದ್ಧಿಪಡಿಸುವ ಕಾರ್ಯವು ಚಾಲ್ತಿಯಲ್ಲಿರುತ್ತದೆ.

ಏತನ್ಮಧ್ಯೆ ದಿನಾಂಕ: 28.10.2024 ರ ಸಚಿವ ಸಂಪುಟ ಸಭೆಯಲ್ಲಿ ರಾಜ್ಯದ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ಹೊಸದಾಗಿ ನೇರ ನೇಮಕಾತಿ ಮಾಡಲು ಅಧಿಸೂಚನೆಯನ್ನು ಹೊರಡಿಸಬಾರದೆಂದು ನಿರ್ಣಯ ಕೈಗೊಂಡಿದ್ದು, ಅದರಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೆನೆನಿ 2024 ದಿನಾಂಕ: 25.11.2024 ರನ್ನು ಹೊರಡಿಸಲಾಗಿದೆ. ಈ ಸುತ್ತೋಲೆಯ ಪೂರ್ವದಲ್ಲಿ ನೇರ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಿದ್ದಲ್ಲಿ ಅಥವಾ ಆಯ್ಕೆ ಪ್ರಕ್ರಿಯೆ ಪ್ರಾರಂಭಗೊಂಡಿದ್ದಲ್ಲಿ ಅಂತಹ ನೇಮಕಾತಿಗಳಿಗೆ ಹೊರಡಿಸಲಾಗಿದ್ದ ಅಧಿಸೂಚನೆಯನ್ವಯವೇ ಪೂರ್ಣಗೊಳಿಸಬಹುದು ಎಂದು ತಿಳಿಸಿದ್ದು, ಅದರಂತೆ ಕ್ರಮವಹಿಸಲಾಗುತ್ತಿದೆ.

ಅಂತೆಯೆ ಸಮಾಜ ಕಲ್ಯಾಣ ಇಲಾಖೆಯು ಯಾವುದೇ ಆಯ್ಕೆ ಪ್ರಾಧಿಕಾರಗಳು / ನೇಮಕಾತಿ ಪ್ರಾಧಿಕಾರಗಳು ಪರಿಶಿಷ್ಟ ಜಾತಿಯ ಒಳ ಮೀಸಲಾತಿ / ಉಪ ವರ್ಗೀಕರಣದ ಕುರಿತು ಸರ್ಕಾರದ ಆದೇಶ ಹೊರಡಿಸುವವರೆಗೆ ಯಾವುದೇ ಖಾಲಿ ಹುದ್ದೆಗಳನ್ನು ನೇಮಕಾತಿ ಮಾಡಬಾರದೆಂದು ದಿನಾಂಕ: 18.02.2025 ರಂದು ತಿಳಿಸಿರುವುದರಿಂದ ಹುದ್ದೆಗಳ ನೇಮಕಾತಿಗೆ ನಿರ್ಬಂಧವಿರುತ್ತದೆ.

ಸರ್ಕಾರವು ದಿನಾಂಕ: 25.11.2024 ರ ಆದೇಶವನ್ನು ತೆರವುಗೊಳಿಸಿದ ನಂತರ ಅನುದಾನಿತ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ತ್ವರಿತವಾಗಿ ಭರ್ತಿ ಮಾಡಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

**ಸಂಖ್ಯೆ: ಇಪಿ 273 ಎಸ್‌ಇಎಸ್ 2025**

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**